# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಕಾಂತುದೇವಾಡಿಗ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ ಇವರನ್ನು ಅಮಾನತ್ತಿನಲ್ಲಿಡುವ ಬಗ್ಗೆ-

**ಓದಲಾಗಿದೆ:**

ತಾಂತ್ರಿಕ ಶಿಕ್ಷಣ ನಿರ್ದೇಶಕರ ಪತ್ರ ಸಂಖ್ಯೆ:ಡಿಟಿಇ 10 ಡಿಇಸಿ (1) 2013, ದಿನಾಂಕ:14-08-2014.

**ಪ್ರಸ್ತಾವನೆ:**

ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರು ಮೇಲೆ ಓದಲಾದ ಪತ್ರದಲ್ಲಿ ಶ್ರೀ.ಕಾಂತುದೇವಾಡಿಗ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ ಇವರು ಮಾನ್ಯ ಉನ್ನತ ಶಿಕ್ಷಣ ಸಚಿವರು ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ ಇಲ್ಲಿಗೆ ದಿನಾಂಕ:14-08-2014 ರಂದು ಬೆಳಗ್ಗೆ ಭೇಟಿ ನೀಡುವ ಪೂರ್ವಭಾವಿ ಕಾರ್ಯಕ್ರಮ ನಿಗಧಿಪಡಿಸಲಾಗಿರುತ್ತದೆ. ಅದರಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರು ಸದರಿ ಸಂಸ್ಥೆಗೆ ಭೇಟಿ ನೀಡಿದಾಗ ಪ್ರಾಂಶುಪಾಲರಾದ ಶ್ರೀ.ಕಾಂತುದೇವಾಡಿಗ ಇವರು ಯಾವುದೇ ಮುನ್ಸೂಚನೆ ಇಲ್ಲದೆ ಸಂಸ್ಥೆಗೆ ಹಾಜರಾಗಿಲ್ಲದಿರುವುದು ಮಾನ್ಯ ಸಚಿವರ ಗಮನಕ್ಕೆ ಬಂದಿರುತ್ತದೆ ಹಾಗೂ ಇವರ ಕಾರ್ಯವೈಖರಿಗಳ ಬಗ್ಗೆ ಕಡತಗಳನ್ನು ಪರಿಶೀಲಿಸಲಾಗಿದ್ದು, ಇವರ ವಿರುದ್ಧ ಸಾರ್ವಜನಿಕರಿಂದ ಹಲವಾರು ದೂರುಗಳು ಬಂದಿರುತ್ತದೆ ಹಾಗೂ ಸಂಸ್ಥೆಯ ಆಡಳಿತವನ್ನು ನಡೆಸುವಲ್ಲಿ ವಿಫಲರಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಆದ್ದರಿಂದ, ಮಾನ್ಯ ಉನ್ನತ ಶಿಕ್ಷಣ ಸಚಿವರು ತಾಂತ್ರಿಕ ಶಿಕ್ಷಣ ನಿರ್ದೇಶಕರನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ಶ್ರೀ.ಕಾಂತುದೇವಾಡಿಗ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ ಇವರನ್ನು ಅಮಾನತ್ತುಗೊಳಿಸುವಂತೆ ತಿಳಿಸಿರುತ್ತಾರೆ.

ಆದ್ದರಿಂದ ಶ್ರೀ.ಕಾಂತುದೇವಾಡಿಗ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ ಇವರು ಕರ್ತವ್ಯದಲ್ಲಿ ಸತ್ಯ, ನಿಷ್ಠೆ ಮತ್ತು ಪ್ರಾಮಾಣಿಕತೆಯನ್ನು ತೋರಿಸುವಲ್ಲಿ ವಿಫಲರಾಗಿದ್ದು, ಒಬ್ಬ ಜವಾಬ್ದಾರಿಯುತ ಸರ್ಕಾರಿ ಅಧಿಕಾರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3(1)(i)(ii)(iii)ನ್ನು ಉಲ್ಲಂಘಿಸಿದ ಆರೋಪಕ್ಕೆ ಒಳಗಾಗಿರುವ ಹಿನ್ನೆಲೆಯಲ್ಲಿ ಸದರಿಯವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10(1)(ಡಿ) ರನ್ವಯ ಅಮಾನತ್ತಿನಲ್ಲಿಡಲು ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ಶಿಫಾರಸ್ಸು ಮಾಡಿರುತ್ತಾರೆ.

ತಾಂತ್ರಿಕ ಶಿಕ್ಷಣ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 165 ಡಿಟಿಇ 2014**
**ಬೆಂಗಳೂರು, ದಿನಾಂಕ: 13ನೇ ಸೆಪ್ಟೆಂಬರ್ 2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ ಶ್ರೀ.ಕಾಂತುದೇವಾಡಿಗ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ ಇವರು ಮಾನ್ಯ ಉನ್ನತ ಶಿಕ್ಷಣ ಸಚಿವರು ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ ಇಲ್ಲಿಗೆ ದಿನಾಂಕ:14-08-2014 ರಂದು ಬೆಳಗ್ಗೆ ಭೇಟಿ ನೀಡಿದ ಸಂದರ್ಭದಲ್ಲಿ ಸರಿಯಾದ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗದೇ ಇರುವುದು ಸದರಿಯವರು ಒಬ್ಬ ಜವಾಬ್ದಾರಿಯುತ ಸರ್ಕಾರಿ ಅಧಿಕಾರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ ಕರ್ತವ್ಯ ಚ್ಯುತಿ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3(1)(i)(ii)(iii)ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಅವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಶ್ರೀ.ಕಾಂತುದೇವಾಡಿಗ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10(1)(ಡಿ) ರನ್ವಯ ಸೇವೆಯಿಂದ ಅಮಾನತ್ತಿನಲ್ಲಿರಿಸಿ ಆದೇಶಿಸಿದೆ.

ಸದರಿಯವರು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ ಹಾಗೂ ಸದರಿಯವರು ನೇಮಕಾತಿ ಪ್ರಾಧಿಕಾರದ ಲಿಖಿತ ಅನುಮೋದನೆಯನ್ನು ಪಡೆಯದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
18/9/14
(ಬಿ.ನಾಗಭೂಷಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

ಗೆ:

1. ಮಹಾಲೇಖಪಾಲರು (ಎ&ಇ, ಲೆಕ್ಕಪರಿಶೋಧನೆ-1&2), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಜಿಲ್ಲಾ ಖಜಾನಾಧಿಕಾರಿ, ಕಾರವಾರ ಜಿಲ್ಲೆ, ಕಾರವಾರ
4. ಶ್ರೀ.ಕಾಂತುದೇವಾಡಿಗ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ (ನಿರ್ದೇಶಕರು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಮುಖಾಂತರ)
5. ಶಾಖಾ ರಕ್ಷಾ ಕಡತ
6. ಹೆಚ್ಚುವರಿ ಪ್ರತಿ.

ದಿನಾಂಕ: 19-09-2014.

ಸಂಖ್ಯೆ: ಡಿಟಿಇ 10 ಡಿಇಕ್ಯೂ (1) 2013

**ಹಿಂಬರಹ**

ಸರ್ಕಾರದ ಆದೇಶ ಸಂ. ಇಡಿ 165 ಡಿಟಿಇ 2014, ದಿನಾಂಕ: 18-09-2014ನ್ನು ಈ ಕೆಳಕಂಡವರ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

**ಇವರಿಗೆ,**

ಶ್ರೀ ಕಾಂತುದೇವಾಡಿಗ, ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ.

**ಪ್ರತಿ ಮಾಹಿತಿಗಾಗಿ:**

1. ಮಹಾಲೇಖಪಾಲರು (ಎ & ಎ ಲೆಕ್ಕಪರಿಶೋಧನೆ- 1 & 2), ಕರ್ನಾಟಕ, ಬೆಂಗಳೂರು.
2. ಜಿಲ್ಲಾ ಖಜಾನಾಧಿಕಾರಿಗಳು, ಕಾರವಾರ.
3. ನಿರ್ದೇಶಕರ ಆಪ್ತಶಾಖೆಗೆ, ಮಾಹಿತಿಗಾಗಿ.
4. ಇಎಸ್‌ಟಿ (1)ಎ, ಇಎಸ್‌ಟಿ (9), ಇಎಸ್‌ಟಿ (8)ಬಿ, ಇಎಸ್‌ಟಿ(7) ನಿರ್ದೇಶನಾಲಯ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.

ನಿರ್ದೇಶಕರು

ರವಾನಿಸಲಾಗಿದೆ
ಸಂ.: 2117
ದಿ: 20/9/2014

ರವಾನಿಸಲಾಗಿದೆ
ಸಂ.: 3496-97
ದಿ: 19/9/14

O/C 19/9/14